


# ಸುದ್ದಿ-ಸಂಚಾರಿ

ಇದು ನಮ್ಮೂರ ಸುದ್ದಿ ವಾಹಿನಿ


**ಬಿಜೆಪಿ**

ಮಾಜಿ ಸಿಎಂ
ಕುಮಾರಸ್ವಾಮಿ ಪ್ರಚಾರ


ಮಂಗಳವಾರ,30ನೇ ಏಪ್ರಿಲ್,2024 | ● ಸಂಪುಟ-1 | ● ಸಂಚಿಕೆ-68 | ● ಉಚಿತ | ● | ● www.suddisanchaari.in




**Top News** ಗೀತಾ ಪರ ಪ್ರಚಾರಕ್ಕೆ ಚಿತ್ರರಂಗದ ನಟ-ನಟಿಯರು

## ‘ಇದು ನ್ಯಾಯ ಹಾಗೂ ಅನ್ಯಾಯದ ಮಧ್ಯೆದ ’ ಚುನಾವಣೆ:ಸಂತೋಷ ಲಾಡ್

ಸುದ್ದಿ-ಸಂಚಾರಿ
ಶಿರಾಳಕೊಪ್ಪ

‘ಇದು ನ್ಯಾಯ ಹಾಗೂ ಅನ್ಯಾಯದ ಮಧ್ಯೆ, ಶ್ರೀಮಂತ ಹಾಗೂ ಶೋಷಿತ ವರ್ಗದ ಮಧ್ಯೆ ನಡೆಯುವ ಚುನಾವಣೆ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಅಭಿಪ್ರಾಯಪಟ್ಟರು. ತಾಲ್ಲೂಕಿನ ಈಸೂರು, ಹಿತ್ತಲ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಸೋಮವಾರ ಕಾಂಗ್ರೆಸ್ ಅಭ್ಯರ್ಥಿ ಗೀತಾ ಶಿವರಾಜಕುಮಾರ್ ಪರ ನಡೆದ ಚುನಾವಣಾ ಪ್ರಚಾರ ಸಭೆಯ ನೇತೃತ್ವ ವಹಿಸಿ ಅವರು ಮಾತನಾಡಿದರು.

‘ಕಾಂಗ್ರೆಸ್ ಸರ್ಕಾರ ಅಧಿಕಾರ ನಡೆಸುವಾಗ ಉಳುವವನೇ ಭೂಮಿ ಒಡೆಯ, ಬ್ಯಾಂಕ್ ರಾಷ್ಟ್ರೀಕರಣ, ಗರೀಬಿ ಹಠಾವೋ ಸೇರಿದಂತೆ ಹಲವು ಜನಪರ ಯೋಜನೆಗಳನ್ನು ನೀಡಿತ್ತು. ದೇಶದಲ್ಲಿ 773 ಜಲಾಶಯ ಕಟ್ಟಿಸಿತ್ತು. ಪ್ರಧಾನಿ ನರೇಂದ್ರ ಮೋದಿ ರೈತರ ಸಾಲ ಮನ್ನಾ ಮಾಡದೇ ಉದ್ಯಮಿಗಳ ₹16 ಲಕ್ಷ ಕೋಟಿ ಸಾಲ ಮನ್ನಾ ಮಾಡಿದ್ದಾರೆ. ₹183 ಲಕ್ಷ ಕೋಟಿ ಸಾಲ ಮಾಡಿದ್ದಾರೆ. ಪ್ರಪಂಚದಲ್ಲಿಯೇ ಸುಳ್ಳು ಪ್ರಚಾರ ಪಡೆಯುವ ಪ್ರಧಾನಮಂತ್ರಿ ನರೇಂದ್ರ ಮೋದಿ ಆಗಿದ್ದಾರೆ’ .ಕಪ್ಪು ಹಣ ವಾಪಸ್ ತರುವ, ಜನರ ಖಾತೆಗೆ ₹15 ಲಕ್ಷ ಹಾಕುವ, ನದಿ ಜೋಡಣೆ ಮಾಡುವ, ಉದ್ಯೋಗ ಸೃಷ್ಟಿಸುವ ಬಗ್ಗೆ ಮಾತನಾಡುತ್ತಿಲ್ಲ. ಬದಲಾಗಿ, ಬುಲೆಟ್ ಟ್ರೈನ್, ಪಾಕಿಸ್ತಾನ, ತಾಲಿಬಾನ್, ಮುಸಲ್ಮಾನರು ಹಾಗೂ ರಾಮಮಂದಿರ ವಿಚಾರಗಳ ಬಗ್ಗೆ ಮಾತ್ರ ಮಾತನಾಡು ತ್ತಿದ್ದಾರೆ. 10 ವರ್ಷದಿಂದ ಅವರು ಬಡವರ ಪರವಾಗಿ ಯಾವ ಯೋಜನೆಯನ್ನೂ ಮಾಡಿಲ್ಲ ಎಂದು ಆರೋಪಿಸಿದರು.

‘ಡಾ.ಅಬ್ದುಲ್ ಕಲಾಂ ಬೇಕು, ಆದರೆ ಮುಸಲ್ಮಾನ ಬೇಡ ಎಂಬ ನಿಲುವು ತಾಳಿರುವ ಬಿಜೆಪಿ ದೇಶ ಒಡೆಯುವ ಕೆಲಸ ಮಾಡುತ್ತಿದೆ’ ಎಂದು ಚಿತ್ರನಟ ದುನಿಯಾ ವಿಜಯ್ ಆರೋಪಿಸಿದರು.

‘ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯದ ಹಣ ಕೊಳ್ಳೆ ಹೊಡೆಯದೇ ನಮ್ಮ ಮನೆ ಹೆಣ್ಣು ಮಕ್ಕಳಿಗೆ ವಾಪಸ್ ಕೊಟ್ಟಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿ ಗೀತಾ ಶಿವರಾಜಕುಮಾರ್ ಅವರನ್ನು ಚುನಾವಣೆಯಲ್ಲಿ ಗೆಲ್ಲಿಸಬೇಕು’ ಎಂದು ಮನವಿ ಮಾಡಿದರು.

‘ಗೀತಕ್ಕ ಅವರು ಹೆಸರು ಹಾಗೂ ದುಡ್ಡು ಮಾಡಲು ರಾಜಕಾರಣಕ್ಕೆ ಬಂದಿಲ್ಲ. ನಿಮ್ಮ ಸೇವೆ ಮಾಡಲು ಬಂದಿದ್ದಾರೆ. ಅವರು ಮಾತನಾಡುವುದಕ್ಕಿಂತ ಕೆಲಸ ಮಾಡುವುದು ಹೆಚ್ಚು’ ಎಂದು ನಟ ಚಿಕ್ಕಣ್ಣ ಹೇಳಿದರು.

ನೀರು ಶುದ್ಧ ಆಗಲು, ಹೊಸ ನೀರು ಬರಬೇಕು. ಶಿವಮೊಗ್ಗ ಅಭಿವೃದ್ಧಿಯಾಗಲು ಗೀತಕ್ಕ ಅವರಿಗೆ ನೀವು ಆಶೀರ್ವಾದ ಮಾಡುವ ಮೂಲಕ ಚುನಾವಣೆಯಲ್ಲಿ ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

ನಟ ಶಿವರಾಜಕುಮಾರ್, ಕಾಂಗ್ರೆಸ್ ವಕ್ತಾರ ಆಯನೂರು ಮಂಜುನಾಥ್, ಶಿವಮೊಗ್ಗ ಉಸ್ತುವಾರಿ ಅನಿಲ್ ಕುಮಾರ್ ತಡಕಲ್, ನಿರ್ಮಾಪಕರಾದ ಸಾ.ರಾ. ಗೋವಿಂದ್, ಎನ್.ಎಂ. ಸುರೇಶ್, ನಿರೂಪಕಿ ಅನುಶ್ರೀ, ಕಾಂಗ್ರೆಸ್ ಮುಖಂಡರಾದ ಎಸ್.ಪಿ. ನಾಗರಾಜಗೌಡ, ಗೋಣಿ ಮಾಲತೇಶ್ ನಗರದ ಮಹಾದೇವಪ್ಪ, ವೈ.ಎಚ್. ನಾಗರಾಜ್, ಪುಷ್ಪಾ ಶಿವಕುಮಾರ್, ಪಾರಿವಾಳ ಶಿವರಾಮ್, ವೀರನಗೌಡ, ಮಾರವಳ್ಳಿ ಉಮೇಶ್, ಭಂಡಾರಿ ಮಾಲತೇಶ್, ಕಲ್ಮನೆ ಸುರೇಶ್, ಶಿವಮೊಗ್ಗ ರೇಖಾ ರಂಗನಾಥ್, ಶಿವ್ಯಾನಾಯ್ಕ, ಉಳ್ಳಿ ದರ್ಶನ್, ಈಸೂರು ಸತೀಶ್, ಬಡಗಿ ಫಾಲಾಕ್ಷ, ರಾಘುನಾಯ್ಕ, ಜೋಗಿಹಳ್ಳಿ ವೀರೇಶ್, ಚನ್ನೇಶ್ ಚುರ್ಚಿಗುಂಡಿ, ಮಲ್ಲಿಕಾನಾಯ್ಕ, ಪುನೀತನಾಯ್ಕ, ರಾಜು ಉಡುಗಣಿ ಉಪಸ್ಥಿತರಿದ್ದರು.

ತಾರಾ ಮೆರಗು:

ಕಾಂಗ್ರೆಸ್ ಅಭ್ಯರ್ಥಿ ಗೀತಾ ಶಿವರಾಜಕುಮಾರ್ ಚುನಾವಣಾ ಪ್ರಚಾರಕ್ಕೆ ಸಿನಿಮಾ ತಾರೆಯರು ಮೆರಗು ನೀಡಿದರು.

ನಟರಾದ ದುನಿಯಾ ವಿಜಯ್, ಚಿಕ್ಕಣ್ಣ, ನಿರೂಪಕಿ ಅನುಶ್ರೀ ಸೇರಿದಂತೆ ಹಲವು ಕಲಾವಿದರು ಚುನಾವಣಾ ಪ್ರಚಾರದಲ್ಲಿ ಪಾಲ್ಗೊಂಡು ಗೀತಾ ಶಿವರಾಜಕುಮಾರ್ ಪರ ಮತಯಾಚಿಸಿದರು.

ತಮ್ಮ ನೆಚ್ಚಿನ ನಟ-ನಟಿಯ ಜತೆ ಸೆಲ್ಫಿ ತೆಗೆದುಕೊಳ್ಳಲು ಗ್ರಾಮದ ಜನರು ಮುಗಿಬಿದ್ದಿದ್ದರು. ನಟ ಶಿವರಾಜಕುಮಾರ್ ಅವರು ಸಿನಿಮಾ ಡೈಲಾಗ್ ಹಾಗೂ ಹಾಡು ಹೇಳಿ ನೆರೆದಿದ್ದವರನ್ನು ರಂಜಿಸಿದರು.

‘ಈಸೂರು ದಂಗೆ’ ಸಿನಿಮಾ ಚಿತ್ರೀಕರಣ ಮುಂದಿನ ದಿನಗಳಲ್ಲಿ ಮಾಡುತ್ತೇವೆ’ ಎಂದು ಶಿವರಾಜಕುಮಾರ್ ಹೇಳಿದರು.

ಈಸೂರು ಸ್ವಾತಂತ್ರ್ಯ ಹೋರಾಟಗಾರರ ಸ್ಮಾರಕಕ್ಕೆ ಪುಷ್ಪ ನಮನ ಸಲ್ಲಿಸಿದರು.

## ಎಸ್.ಎಂ. ಕೃಷ್ಣ ಆರೋಗ್ಯ ಸ್ಥಿರ

ಬೆಂಗಳೂರು: ಕೇಂದ್ರದ ಮಾಜಿ ಸಚಿವ ಎಸ್.ಎಂ. ಕೃಷ್ಣ ಅವರು ಆಸ್ಪತ್ರೆಯಲ್ಲಿ ಚೇತರಿಸಿಕೊಳ್ಳುತ್ತಿದ್ದು, ಆರೋಗ್ಯ ಸ್ಥಿರವಾಗಿದೆ ಎಂದು ಇಲ್ಲಿನ ಮಣಿಪಾಲ್ ಆಸ್ಪತ್ರೆಯ ವೈದ್ಯರು ತಿಳಿಸಿದ್ದಾರೆ.

ಹಿರಿಯ ನಾಯಕ ಎಸ್.ಎಂ. ಕೃಷ್ಣ ಅವರು ವಯೋ ಸಹಜ ಕಾಯಿಲೆಗೆ ಚಿಕಿತ್ಸೆ ಪಡೆಯಲು ವೈದೇಹಿ ಆಸ್ಪತ್ರೆಗೆ ದಾಖಲಾಗಿದ್ದರು. ಅಲ್ಲಿ ಮೂರು ದಿನ ಚಿಕಿತ್ಸೆ ನೀಡಿದ ಬಳಿಕ ಮಣಿಪಾಲ್ ಆಸ್ಪತ್ರೆಗೆ ಅವರನ್ನು ಸ್ಥಳಾಂತರ ಮಾಡಲಾಗಿತ್ತು.

ಡಾ. ಸತ್ಯನಾರಾಯಣ ಮೈಸೂರು ಮತ್ತು ವೈದ್ಯಕೀಯ ತಜ್ಞರ ತಂಡ ಚಿಕಿತ್ಸೆ ನೀಡುತ್ತಿದೆ. ಯಾರೂ ಆತಂಕ ಪಡುವ ಅಗತ್ಯವಿಲ್ಲ ಎಂದು ಮಣಿಪಾಲ್ ಆಸ್ಪತ್ರೆಯ ವೈದ್ಯರು ತಿಳಿಸಿದ್ದಾರೆ.

## ಸಂಸದ ಶ್ರೀನಿವಾಸ ಪ್ರಸಾದ್ ನಿಧನ

ಮೈಸೂರು: ಕೇಂದ್ರದ ಮಾಜಿ ಸಚಿವ, ಚಾಮರಾಜನಗರದ ಸಂಸದ ವಿ. ಶ್ರೀನಿವಾಸ ಪ್ರಸಾದ್ (76) ವಯೋಸಹಜ ಅನಾರೋಗ್ಯದಿಂದ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಸೋಮವಾರ ನಸುಕಿನಲ್ಲಿ ನಿಧನರಾದರು.

ಅವರಿಗೆ ಪತ್ನಿ ಭಾಗ್ಯಲಕ್ಷ್ಮಿ, ಪುತ್ರಿಯರಾದ ಪ್ರತಿಮಾ, ಪೂರ್ಣಿಮಾ, ಪೂನಂ, ಅಳಿಯಂದಿರಾದ ಮಾಜಿ ಶಾಸಕ ಬಿ.ಹರ್ಷವರ್ಧನ್, ಐಆರ್‌ಎಸ್ ಅಧಿಕಾರಿ ಪಿ.ದೇವರಾಜ್ ಹಾಗೂ ಡಾ.ಎನ್.ಎಸ್. ಮೋಹನ್ ಮತ್ತು ಐವರು ಮೊಮ್ಮಕ್ಕಳು ಇದ್ದಾರೆ.

Swamy Vivekananda Vidya Samasthe ( R)

# KUMADVATHI FIRST GRADE COLLEGE

Affiliated to Kuvempu University

Shimoga Road Shikaripura - 577 427





## ADMISSION NOW OPEN FOR 2024-25

BCA, B.Sc., B.Com, M.Com.

### 2022-23 University Rank Holders & College Toppers



| | | | | | |
|---|---|---|---|---|---|
| ★ Shilpashree G.S. | ★ Salma Banu | Sinchana M.S | Muskan V. | Anupriya M | Aishwarya K |
| 2022-23 - B.Sc | 2022-23 - B.Sc | B.Sc | B.Sc | B.Com | B.Com |
| University 1st Rank | University 3rd Rank | 95.58% | 95.17% | 92.67% | 91.53% |

### State of the art Laboratories



### WHY BCA/B.SC/B.COM /M.COM @ KFGC?

- Good Academic results with 9 University ranks from previous batches and streak is maintaining every year
- Highly disciplined & committed quality teaching environment
- Personality Development and Career Building counselling
- Competitive exam / Professional exams coaching like CA/CS/CMA Foundation
- Campus Placement Assistance

### Campus Placement and recruitments by top recruiting partners

For campus visit and enquiries: Reach Us @

Mr.Ravindra K.C, Principal, Mob. No. 9886840694 / 8105684508

# ಶಿಕಾರಿಪುರ ಕುಮದ್ವತಿ ಕಾಲೇಜ್ ಪ್ರವೇಶ ಪ್ರಾರಂಭ



Top News **ಪಕ್ಷೇತರ ಅಭ್ಯರ್ಥಿ ಕೆ.ಎಸ್.ಈಶ್ವರಪ್ಪ ಹೇಳಿಕೆ**

# ಹಿಂದೂ-ಮುಸ್ಲಿಂ-ಕ್ರಿಶ್ಚಿಯನ್ ಅಣ್ಣ ತಮ್ಮರಿದ್ದಂತೆ

ಸುದ್ದಿ-ಸಂಚಾರಿ

ಆನವಟ್ಟಿ:ನಾನು ರಾಷ್ಟ್ರಭಕ್ತ ಮುಸ್ಲಿಂರನ್ನು ಗೌರವಿಸುತ್ತೇನೆ. ಕ್ರೈಸ್ತ, ಮುಸ್ಲಿಂ, ಹಿಂದು ಎಲ್ಲರೂ ಅಣ್ಣತಮ್ಮರಿದಂತೆ. ಆದರೆ ರಾಷ್ಟ್ರ ದ್ರೋಹಿಗಳು, ಅತ್ಯಚಾರಿಗಳು, ಭಯೋತ್ಪಾದಕರನ್ನು ದ್ವೇಷಿಸುತ್ತೇನೆ. ಲವ್ ಜಿಹಾದ್ ಹೆಸರಲ್ಲಿ ಹಿಂದು ಮಹಿಳೆಯರನ್ನು ಕೊಲೆ ಮಾಡುವವರಿಗೆ ಶಿಕ್ಷೆಯಾಗುವವರೆಗೂ ಬಿಡುವುದಿಲ್ಲ ಎಂದು ಶಿವಮೊಗ್ಗ ಕ್ಷೇತ್ರದ ಬಿಜೆಪಿ ಬಂಡಾಯ ಅಭ್ಯರ್ಥಿ ಹಾಗೂ ಮಾಜಿ ಉಪಮುಖ್ಯಮಂತ್ರಿ ಕೆ.ಎಸ್ ಈಶ್ವರಪ್ಪ ಗುಡುಗಿದರು.

ಭಾನುವಾರ ಇಲ್ಲಿನ ಇಂಡಿಯನ್ ಪೆಟ್ರೋಲ್ ಬಂಕ್‌ದ ಆವರಣದಲ್ಲಿ ರಾಷ್ಟ್ರಭಕ್ತರ ಬಳಗ ಹಮ್ಮಿಕೊಂಡಿದ್ದ ಕೆ.ಎಸ್ ಈಶ್ವರಪ್ಪ ಅವರ ಮತಯಾಚನೆಯ ಬಹಿರಂಗ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದರು.

ನರೇಂದ್ರ ಮೋದಿ ಅವರು ಕಾಂಗ್ರೆಸ್ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಅವರ ಕುಟುಂಬ ರಾಜಕರಣ ಅಂತ್ಯಗೊಳಿಸುವ ಶಪಥ ಮಾಡಿದ್ದಾರೆ. ಆದರೆ ಕರ್ನಾಟಕದಲ್ಲಿ ಬಿಜೆಪಿ ತೊರೆದು, ಮೋದಿ, ಅಮಿತ್ ಶಾ ಅವರನ್ನು ಮನಸ್ಸಿಗೆ ಬಂದಂತೆ ಬೈದು, ಮತ್ತೆ ಬಿಜೆಪಿ ಸೇರಿ ತನ್ನ ಕುಟುಂಬದ ಹಿಡಿತದಲ್ಲಿ ಪಕ್ಷವನ್ನು ಇಟ್ಟುಕೊಂಡಿರುವ ಯಡಿಯೂರಪ್ಪ ಅವರು ತಮ್ಮ ಸ್ವಾರ್ಥ ರಾಜಕರಣಕ್ಕೆ ಅಪ್ಪಟ ಹಿಂದುವಾದಿ ನಾಯಕರನ್ನು ಮೂಲೆಗುಂಪು ಮಾಡಿ ತನ್ನಗೆ ಬೇಕಾದವರಿಗೆ ಬಿಜೆಪಿ ಟಿಕೆಟ್ ಕೊಡಿಸಿದ್ದಾರೆ. ರಾಘವೇಂದ್ರ ಅವರನ್ನು ಸೋಲಿಸಿ, ಕುಟುಂಬ ರಾಜಕರಣಕ್ಕೆ ಅಂತ್ಯಕಾಣಿಸುವುದೇ ನನ್ನ ಗುರಿ ಎಂದು ಯಡಿಯೂರಪ್ಪ ಕುಟುಂಬದ ಮೇಲೆ ಹರಿಹಾಯ್ದರು.

ಸಿದ್ದರಾಮಯ್ಯ ಗ್ಯಾರಂಟಿ ಹೆಸರಲ್ಲಿ ರಾಜ್ಯದ ಖಾಜಾನೆ ಖಾಲಿ ಮಾಡಿದ್ದಾರೆ. ಕೇಂದ್ರದಲ್ಲಿ ಕಾಂಗ್ರೆಸ್ ಬಂದರೆ ಐದು ಗ್ಯಾರಂಟಿ ಜನರಿಗೆ ನೀಡುತ್ತೇವೆ ಎಂದು ನೀಡಿರುವ ಕಾರ್ಡ್ ಎಲ್ಲಾ ಹಸಿಸುಳ್ಳು, ಅವುಗಳನ್ನು ಸುಟ್ಟು ಹಾಕಿ ಎಂದರು.

ಬಡವರ ಹೆಸರಲ್ಲಿ ರಾಜಕರಣ ಮಾಡುವ ಕಾಂಗ್ರೆಸ್ , ಬಿಜೆಪಿ ಬಡವರಿಗೆ ಏನು ಅನುಕೂಲ ಮಾಡಿಲ್ಲ. ನಾನು ಉಪಮುಖ್ಯಮಂತ್ರಿಯಾಗಿದ್ದಾಗ ಶಿವಮೊಗ್ಗದ ಸಾಕಷ್ಟು ಬಡವರಿಗೆ ಅನುಕೂಲ ಮಾಡಿಕೊಟ್ಟಿದ್ದೇನೆ. ಮಠ, ಮಂದಿರಗಳಿಗೆ ಅನುದಾನ ಕೊಡಿಸಿದ್ದೇನೆ.ಆದರೆ, ಸೊರಬ ತಾಲ್ಲೂಕಿನಲ್ಲಿ 35 ವರ್ಷದಿಂದ ಬಗರ್ ಹುಕಂ, ಅರಣ್ಯ ವಾಸಿಗಳಿಗೆ ಹಕ್ಕು ಪತ್ರ ನೀಡುತ್ತೇವೆ ಎಂದು ಹೇಳುತ್ತಲ್ಲೇ ಜನರಿಗೆ ಮೋಸ ಮಾಡಿದ್ದಾರೆ. ಎಲ್ಲಾ ಜಾತಿ ಧರ್ಮದಲ್ಲೂ ಬಡವರಿದ್ದಾರೆ. ಅವರಿಗೆ ನ್ಯಾಯ ಒದಗಿಸುವುದೇ ನನ್ನ ಮೊದಲ ಕೆಲಸ ಎಂದರು.

ಬಂಗಾರಪ್ಪ ಅವರನ್ನು ಕಂಡರೇ ನನಗೆ ತುಂಬಾ ಗೌರವ, ಕಾರಣ, ಅವರು ಬಡವರ ಪರ ಚಿಂತನೆ ಮಾಡುತ್ತಿದ್ದರು ಮತ್ತು ಬಡವರ ಪರ ಯೋಜನೆಗಳನ್ನು ಜಾರಿಗೆ ತಂದಿದ್ದರು ಎಂದ ಅವರು. ಅವರ ಮಕ್ಕಳಾದ ಕುಮಾರ್ ಬಂಗಾರಪ್ಪ, ಮಧು ಬಂಗಾರಪ್ಪ ಅವರ ಕಚ್ಚಾಟದಿಂದ ಸೊರಬ ಕ್ಷೇತ್ರ ಅಭಿವೃಧಿಯಾಗಿಲ್ಲ. ಸಂಪೂರ್ಣ ನೀರಾವರಿ ಕಲ್ಪಿಸಲು ಸಾಧ್ಯವಾಗಿಲ್ಲ . ಇನ್ನೂ ಅವರ ಪುತ್ರಿ ಗೀತಾ ಶಿವಕುಮಾರ್ ಏನು ಮಾಡಬಹುದು ಎಂದು ನೀವೆ ಯೋಚಿಸಿ ಎಂದರು.

ಬಿಜೆಪಿ ನನಗೆ ತಾಯಿ ಇದ್ದಂತೆ, ನಾನು ಬಿಜೆಪಿ ಬಿಟ್ಟು ಎಲ್ಲೂ ಹೋಗಲ್ಲ. ಲೋಕಸಭೆ ಚುಣಾವಣೆಯಲ್ಲಿ ಗೆದ್ದು ಮತ್ತೆ ಬಿಜೆಪಿ ಕೈಹಿಡಿಯುತ್ತೇನೆ. ಯಡಿಯೂರಪ್ಪ ಕುಟುಂಬ ನನ್ನ ಬಗ್ಗೆ ಇಲ್ಲಸಲ್ಲದ ವದಂತಿ ಹರಡಿಸಿದ್ದರು. ಆದರೆ ಪಕ್ಷವನ್ನು ಶುದ್ದೀಕರಿಸುವ ತಪಸ್ಸು ಕೈಗೊಂಡಿದ್ದೇನೆ. ದೇಶಕ್ಕೆ ಮೋದಿ, ಶಿವಮೊಗ್ಗಕ್ಕೆ ಜನ ಕರೆಯುವಂತೆ ಹಿಂದೂ ಹುಲಿ ಕೆ.ಎಸ್ ಈಶ್ವರಪ್ಪ, ನನ್ನ ಕಬ್ಬು ಹಿಡಿದ ರೈತನ ಗುರುತಿಗೆ ಮತ ನೀಡುವಂತೆ ಮನವಿ ಮಾಡಿದರು.

ಬಹಿರಂಗ ಸಮಾವೇಶದಲ್ಲಿ ಆನವಟ್ಟಿ ಘಟಕದ ರಾಷ್ಟ್ರ ಭಕ್ತರ ಬಳಗದ ಅಧ್ಯಕ್ಷ ರಾಮಾನಾಯ್ಕ ಕೋಟಿಪುರ, ಸದಸ್ಯರಾದ ಕೇಶವ ನಾಯ್ಕ, ಸಂಜೀವ್ ನಾಯ್ಕ, ಪ್ರಶಾಂತ ನೆಲ್ಲಿಕೊಪ್ಪ ಮುಖಂಡರಾದ ವಿಠ್ಠಲ್ ಬನ್ನಿ, ಟಿ.ವಿ ಬೆಳಗಾವಿ, ಎನ್‌ವೀರಪ್ಪ, ಮೂಗಡಪ್ಪ, ಸುಜಾತ ಕಳ್ಳಿಕೇರಿ, ದುರ್ಗಪ್ಪ ಅಂಗಡಿ, ದಾನಪ್ಪ ಗಂಟೇರ್, ಪ್ರಭಾಕರ್ ರಾಯ್ಕರ್, ಚಿದಾನಂದಗೌಡ, ಮಂಜುನಾಥ ಸಾಗರ, ಹೇಮಾರವಿ, ವಕೀಲ ಶಿವಪ್ಪ ಇದ್ದರು.

## ದ್ವಾರಕನಾಥ್ ಗೀತಾ ಪರ ಪ್ರಚಾರ



ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಗೀತಾ ಶಿವರಾಜ್ ಕುಮಾರ್ ಪರವಾಗಿ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಮಾಜಿ ಅಧ್ಯಕ್ಷ, ಕೆಪಿಸಿಸಿ ವಕ್ತಾರ ಸಿ.ಎಸ್. ದ್ವಾರಕನಾಥ್ ಈಚೆಗೆ ಶಿವಮೊಗ್ಗ ತಾಲ್ಲೂಕು ಹಸೂಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಿಕ್ಕಮರಡಿ ಸುತ್ತಮುತ್ತಲ ಗ್ರಾಮಗಳಲ್ಲಿ ಪ್ರಚಾರ ನಡೆಸಿದರು. ಕೆಪಿಸಿಸಿ ರಾಜ್ಯ ಸಂಯೋಜಕ, ಅಖಿಲ ಕರ್ನಾಟಕ ಡಿ.ಕೆ. ಶಿವಕುಮಾರ್ ಅಭಿಮಾನಿ ಬಳಗದ ಜಿಲ್ಲಾ ಘಟಕದ ಅಧ್ಯಕ್ಷ ಆರ್. ಮೋಹನ್ ನೇತೃತ್ವದಲ್ಲಿ ನಡೆದ ಈ ಪ್ರಚಾರ ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಪಕ್ಷದ ಅನಿವಾಸಿ ಭಾರತೀಯ ವಿಭಾಗದ ರಾಜ್ಯ ಘಟಕದ ಉಪಾಧ್ಯಕ್ಷರಾದ ಆರತಿ ಕೃಷ್ಣ, ರಾಜ್ಯ ಸಾಮಾಜಿಕ ನ್ಯಾಯ ಸಮಿತಿಯ ಪದ್ಮಾ ಶಿವಮೊಗ್ಗ ಪಾಲ್ಗೊಂಡರು.

‘ಶೋಷಿತರು ಮತ್ತು ಬಡವರ ಪರವಾದ ಪಕ್ಷ ಕಾಂಗ್ರೆಸ್. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ನಂತರ ಜಾರಿಗೆ ತಂದ ಐದು ಗ್ಯಾರಂಟಿ ಯೋಜನೆಗಳು ಬಡವರಿಗೆ ಬಹುದೊಡ್ಡ ಶಕ್ತಿ ನೀಡಿವೆ’ ಎಂದು ದ್ವಾರಕನಾಥ್ ಹೇಳಿದರು.

‘ಬಿಜೆಪಿ ಸಂವಿಧಾನ ವಿರೋಧಿ. ಅದು ಅಂಬೇಡ್ಕರ್ ಕೊಟ್ಟ ಸಂವಿಧಾನವನ್ನೇ ಬದಲಾಯಿಸುವುದಾಗಿ ಹೇಳುತ್ತಿದೆ. ಹಾಗೇನಾದರೂ ಮಾಡಿದರೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಜನರ ಬದುಕು ಬೀದಿ ಪಾಲಾಗುವುದು ಖಚಿತ. ಹಾಗಾಗಿ ಬಿಜೆಪಿಯನ್ನು ತಿರಸ್ಕರಿಸಿ, ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕು’ ಎಂದು ಮನವಿ ಮಾಡಿದರು.

ಹಕ್ಕಿಪಿಕ್ಕಿ ಕ್ಯಾಂಪ್ ಸಿದ್ದೇಶ್ವರ ನಗರದಲ್ಲಿ ನಡೆದ ಪ್ರಚಾರ ಸಭೆಯಲ್ಲಿ ಕಾಂಗ್ರೆಸ್ ಮುಖಂಡರಾದ ರಮೇಶ್ ಗೌಡ, ಜಯಕೀರ್ತಿ, ಬಿ. ಜಗದೀಶ್, ಗಿರೀಶ್ ಬುಕ್ಲಾಪುರ ಸೇರಿ ಹಲವು ಮುಖಂಡರು ಇದ್ದರು.

ಸುದ್ದಿ-ಸಂಚಾರಿ

ಇದು ನಮ್ಮೂರ ಸುದ್ದಿ ವಾಹಿನಿ

## ಬಿವೈಆರ್ ಪರ ಕುಮಾರಸ್ವಾಮಿ ಪ್ರಚಾರ



ಕೋಣಂದೂರು: ‘ಅಭಿವೃದ್ಧಿಗಾಗಿ ಯಾವುದೇ ಕಾರ್ಯಕ್ರಮಗಳನ್ನು ರೂಪಿಸದೇ ಗ್ಯಾರಂಟಿಗಳಿಗಾಗಿ ₹52,000 ಕೋಟಿ ಸಾಲ ಮಾಡಿದ್ದೇ ಕಾಂಗ್ರೆಸ್ ಪಕ್ಷದ ಸಾಧನೆ’ ಎಂದು ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಟೀಕಿಸಿದರು.

ಇಲ್ಲಿ ಸೋಮವಾರ ನಡೆದ ಬಿಜೆಪಿ ಚುನಾವಣಾ ಪ್ರಚಾರ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

‘ರಾಜ್ಯ ಸರ್ಕಾರ ರಚನೆಯಾಗಿ 11 ತಿಂಗಳು ಕಳೆದರೂ ಅಭಿವೃದ್ಧಿಗಾಗಿ ಒಂದು ಪೈಸೆಯನ್ನೂ ಕೊಡಲಿಲ್ಲ. ಪ್ರತಿಯೊಂದಕ್ಕೂ ಕೇಂದ್ರ ಸರ್ಕಾರದತ್ತ ಬೊಟ್ಟು ಮಾಡಿ ತೋರಿಸುವುದು ಇವರ ಸಾಧನೆ. ದಲಿತರಿಗೆ ಮೀಸಲಿದ್ದ ಹಣವನ್ನು ಗ್ಯಾರಂಟಿಗಳಿಗೆ ವಿನಿಯೋಗಿಸುವ ಮೂಲಕ ದಲಿತರಿಗೆ ಮೋಸ ಮಾಡಿದ್ದಾರೆ. ಗ್ಯಾರಂಟಿ ಅನುಷ್ಠಾನಕ್ಕಾಗಿ ಮಾಡಿರುವ ಸಾಲದ ಹೊರೆಯನ್ನು ತೀರಿಸುವವರು ಯಾರು? ಎಂದು ಅವರು ಪ್ರಶ್ನಿಸಿದರು.

94 ಸದಸ್ಯರನ್ನು ನಿಗಮ ಮಂಡಳಿಗಳಿಗೆ ನೇಮಕ ಮಾಡಿದ್ದಾರೆ. ಅವರಿಗೆ ಲಕ್ಷಗಟ್ಟಲೆ ಸಂಬಳ, ಬೆಂಗಳೂರಿನಲ್ಲಿ ನಿವಾಸ ಕೊಡುವ ಮೂಲಕ ದುಂದುವೆಚ್ಚ ಮಾಡುತ್ತಿದ್ದಾರೆ. ಪ್ರತಿಯೊಬ್ಬ ವ್ಯಕ್ತಿಯ ಮೇಲೆ ₹36,000 ಸಾಲ ಇದೆ. ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಇದ್ದ ಅವಧಿಯಲ್ಲಿ (2004-2014) ರಾಜ್ಯ ಸರ್ಕಾರ ₹19,500 ಕೋಟಿ ಬರಪರಿಹಾರಕ್ಕೆ ಬೇಡಿಕೆ ಸಲ್ಲಿಸಿತ್ತು. ಆದರೆ ₹1,500 ಕೋಟಿ ನೀಡಿತ್ತು. ಮೋದಿ ಸರ್ಕಾರಕ್ಕೆ ಈ ವರ್ಷ ರಾಜ್ಯ ಸರ್ಕಾರ ₹18,174 ಕೋಟಿ ಬೇಡಿಕೆ ಸಲ್ಲಿಸಿತ್ತು. ಈ ಪೈಕಿ ₹3,454 ಕೋಟಿಯನ್ನು ಮೋದಿ ಸರ್ಕಾರ ಮಂಜೂರು ಮಾಡಿದೆ ಎಂದು ವಿವರಿಸಿದರು.

‘ದೇಶದಲ್ಲಿಯೇ ಅತ್ಯಂತ ಪ್ರಜ್ಞಾವಂತ ಮತದಾರರಿರುವ ಕ್ಷೇತ್ರ ತೀರ್ಥಹಳ್ಳಿ. ನೀವು ಪ್ರಜ್ಞಾವಂತಿಕೆಯಿಂದ ಮತ ಚಲಾಯಿಸುತ್ತೀರಿ ಎಂಬ ನಂಬಿಕೆ ನನಗಿದೆ’ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಬಿಜೆಪಿ ಅಭ್ಯರ್ಥಿ ಬಿ.ವೈ.ರಾಘವೇಂದ್ರ ಮಾತನಾಡಿದರು. ಬಿಜೆಪಿ ತಾಲ್ಲೂಕು ಘಟಕದ ಅಧ್ಯಕ್ಷ ನವೀನ್ ಹೆದ್ದೂರು ಅಧ್ಯಕ್ಷತೆ ವಹಿಸಿದ್ದರು. ಶಾಸಕ ಆರಗ ಜ್ಞಾನೇಂದ್ರ, ಜೆಡಿಎಸ್ ತಾಲ್ಲೂಕು ಘಟಕದ ಅಧ್ಯಕ್ಷ ಕುಣಜೆ ಕಿರಣ್, ಮುಖಂಡರಾದ ರಘುಪತಿ ಭಟ್, ಬಾಳೆಬೈಲು ರಾಘವೇಂದ್ರ, ಪುಣ್ಯಪಾದ, ಬೇಗುವಳ್ಳಿ ಸತೀಶ್, ಸಾಲೆಕೊಪ್ಪ ರಾಮಚಂದ್ರ, ಕುಕ್ಕೆ ಪ್ರಶಾಂತ್, ಟಿ.ಮಂಜುನಾಥ್, ಅಪೂರ್ವ ಶರಧಿ ಪೂರ್ಣೇಶ್ ಇತರರು ಇದ್ದರು.

# ಅಂಕಗಳಿಕೆಯ ಜೊತೆ ಕೌಶಲ್ಯ ಬೆಳಸಿಕೊಳ್ಳಿ :ಗೋಪಾಲ ಕೃಷ್ಣ ಮರಳಿ ಕರೆ

**ಶಿರಾಳಕೊಪ್ಪ ಸರ್ಕಾರಿ ಅಕ್ಕಮಹಾದೇವಿ ಮಹಿಳಾ ಪಾಲಿಟೆಕ್ನಿಕ್ ನ ವಿದ್ಯಾರ್ಥಿ ಸಂಘ , ಕ್ರೀಡಾ ಸಂಘ, ಎನ್.ಎಸ್.ಎಸ್.ಹಾಗೂ ಯುವ ರೆಡ್ ಕ್ರಾಸ್ ಘಟಕಗಳ ಸಮಾರೋಪ ಸಮಾರಂಭ**





ಸುದ್ದಿ-ಸಂಚಾರಿ
ಶಿರಾಳಕೊಪ್ಪ
ಅಂಕಗಳಿಕೆಯ ಜೊತೆ ಕೌಶಲ್ಯ ಬೆಳಸಿಕೊಳ್ಳಿ, ಪುರುಷರಿಗಿಂತ ಮಹಿಳೆಯರು ಉದ್ಯೋಗದಲ್ಲಿ ದಕ್ಷರಾಗಿದ್ದಾರೆ ಎಂದು ಎಲಿಮೆಂಟ್ 14 ಸಂಸ್ಥೆಯ ಹಣಕಾಸು ನಿಯಂತ್ರಕ ಗೋಪಾಲ ಕೃಷ್ಣ ಮರಳಿ ಹೇಳಿದರು.

ಪಟ್ಟಣ ಸಮೀಪದ ತಡಗಣಿಯ ಶಿವ ಶರಣೆ ಅಕ್ಕಮಹಾದೇವಿ ಸರಕಾರಿ ಮಹಿಳಾ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಬುಧವಾರ ನಡೆದ ವಿದ್ಯಾರ್ಥಿ ಸಂಘ , ಕ್ರೀಡಾ ಸಂಘ, ಎನ್.ಎಸ್.ಎಸ್.ಹಾಗೂ ಯುವ ರೆಡ್ ಕ್ರಾಸ್ ಘಟಕಗಳ ಸಮಾರೋಪ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ನಾವು ಶೇ 60ರಷ್ಟು ಶಿಕ್ಷಣಕ್ಕೆ ಸಾಮಾಜಿಕ ಬದ್ಧತೆಯಲ್ಲಿ ಮೀಸಲಿಟ್ಟಿದ್ದೇವೆ. ನಮ್ಮ ಸಂಸ್ಥೆ ಮಹಿಳೆಯರಿಗೆ ಶೇ 50 ರಷ್ಟು ಉದ್ಯೋಗ ಅವಕಾಶ ನೀಡಲಾಗಿದೆ. ಕೋವಿಡ್ ಸಮಯದಲ್ಲಿ 40 ಲಕ್ಷ , ವಿಕಲ ಚೇತನ ಮೂರು ಸಂಸ್ಥೆಗಳಿಗೆ 50 ಲಕ್ಷ ದೇಣಿಗೆ ನೀಡಿದ್ದೇವೆ. ಚಿತ್ರದುರ್ಗದ ಸರಕಾರಿ ಶಾಲೆಗಳಿಗೆ ಅನುದಾನ ನೀಡಿದ್ದೇವೆ. ಹೊಟ್ಟೆ ತುಂಬಿದವರಿಗೆ ಊಟ ಕೊಟ್ಟರೆ ಸಾರ್ಥಕವಾಗುವುದಿಲ್ಲ, ಸಮಾಜಿಕ ಬದ್ಧತೆಯ ಉದ್ದೇಶದಿಂದ ಗ್ರಾಮೀಣ ಪ್ರದೇಶದ ಶಾಲಾ-ಕಾಲೇಜುಗಳಿಗೆ ಸೇವೆ ಮಾಡುವುದು ನಮ್ಮ ಸಂಸ್ಥೆಯ ಉದ್ದೇಶವಾಗಿದೆ ಎಂದು ಹೇಳಿದರು.

ಮೌಲಾನಾ ಆಜಾದ್ ಮಾದರಿ ಶಾಲೆಯ ಮುಖ್ಯೋಪಾಧ್ಯಾಯೆ ಮಮತಾ ಸಾಲಿ ಮಾತನಾಡಿ, ಮನುಷ್ಯನಾಗಿ ಹುಟ್ಟಿ ಕೇವಲ ಮನುಷ್ಯನಾಗಿ ಬಾಳಿದರೆ ಸಾಲದು, ಸಮಾಜ ಮುಖಿ ಕೆಲಸ ಮಾಡಿದಾಗ ಮಾತ್ರ ಶ್ರೇಷ್ಠನಾಗುತ್ತಾನೆ. ಹಿರಿಯರು ಹಾಕಿದ ಮೇಲ್ಪಂಕ್ತಿಯಲ್ಲಿ ಕಿರಿಯರು ನಡೆಯಬೇಕು, ಸಮಯದ ಮಹತ್ವ ಹೆಚ್ಚಿದೆ ಅದನ್ನು ವ್ಯರ್ಥಮಾಡಬೇಡಿ, ಶಿರಾಳಕೊಪ್ಪ ಕಲಿಕೆಗೆ ಶೈಕ್ಷಣಿಕ ಕೇಂದ್ರ. ವಿದ್ಯಾರ್ಥಿದೆಸೆಯಲ್ಲೆ ವಿದ್ಯಾರ್ಥಿ ಸಂಘಗಳು ನಮ್ಮನ್ನು ನಾಯಕತ್ವ ಗುಣ ಹೊಂದಲು ನೆರವಾಗುತ್ತವೆ. ಸಿಕ್ಕ ಅವಕಾಶ ಬಳಸಿಕೊಳ್ಳಿ ಎಂದು ವಿದ್ಯಾರ್ಥಿನಿಯರಿಗೆ ಕಿವಿ ಮಾತು ಹೇಳಿದರು.

ಸಿದ್ದಾಪುರದ ಸರಕಾರಿ ಪಾಲಿಟೆಕ್ನಿಕ್ ಪ್ರಾಂಶುಪಾಲ ಶಾಂತರಾಮ್ ಮಾತನಾಡಿ, ಸಹಕಾರ ಸದುಪಯೋಗ ಪಡೆದುಕೊಳ್ಳಿ ಎಂದರು.ಕಾಲೇಜಿನ ಪ್ರಾಂಶುಪಾಲ ರವಿಶಂಕರ್ ಡಿ.ಎಸ್ ಅಧ್ಯಕ್ಷತೆ ವಹಿಸಿ ಮಾತನಾಡಿ, ಎಲಿಮೆಂಟ್ 14 ಸಂಸ್ಥೆ ನೀಡಿದ ಹನ್ನೆರಡು ಲಕ್ಷ ರೂ ನೀಡಿದ ಅನುದಾನದಲ್ಲಿ ಕಂಪ್ಯೂಟರ್ ಲ್ಯಾಬ್ ಮತ್ತು ಎಲೆಕ್ಟ್ರಾನಿಕ್ ಲ್ಯಾಬ್ ಅತ್ಯುತ್ತಮವಾಗಿ ನಿರ್ಮಾಣಗೊಂಡಿದೆ ಇದು ಸಾವಿರಾರು ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ ಎಂದರು.

ಎಲಿಮೆಂಟ್ ಕಂಪನಿ ನೀಡಿದ ಕಂಪ್ಯೂಟರ್ ನಿಂದ ಅಭ್ಯಾಸಕ್ಕೆ ನೆರವಾಗಿದೆ, ಲ್ಯಾಬ್ ನಲ್ಲಿ ಕಿಟ್ ಕೊರತೆ ಇತ್ತು ಎಲಿಮೆಂಟ್ 14 ಕೊರತೆ ನೀಗಿಸಿದ್ದಾರೆ ಎಂದು ಅಶ್ವಿನಿ, ಪಲ್ಲವಿ, ಪ್ರಗತಿ ತಮ್ಮ ಅನಿಸಿಕೆ ವ್ಯಕ್ತ ಪಡಿಸಿದರು.ಉಪನ್ಯಾಸಕ ಉಮೇಶ್ ಆಶಯನುಡಿ ನುಡಿದರು, ವರಲಕ್ಷ್ಮಿ ಪ್ರಾರ್ಥಿಸಿ, ಭಾವನಾ ಸ್ವಾಗತಿಸಿ, ಶೀಲಾ ಅತಿಥಿ ಪರಿಚಯಿಸಿ, ಪ್ರಿಯಾ, ಸಿಂಚನ ವಾರ್ಷಿಕ ವರದಿ ಓದಿದರು.ವೇದಿಕೆಯಲ್ಲಿ ಎಂ. ಕೆ. ಪ್ರಿಯ, ಡಿ.ಕೆ. ಉಮೇಶ್ ,ಎಸ್.ಆರ್. ರವಿಂದ್ರ,ಸಿ.ನಾಗರತ್ನ,ಹೆಚ್.ಜಯಪ್ಪ, ಡಿ.ಎಸ್ .ನಾಗರಾಜ್ ಇದ್ದರು.

## ಮೊಬೈಲ್ ಅಂಗಡಿ ಬೆಂಕಿಗೆ ಆಹುತಿ

ಸುದ್ದಿ ಸಂಚಾರಿ | ಶಿವಮೊಗ್ಗ

ನಗರದ ಖಾಸಗಿ ಬಸ್ ನಿಲ್ದಾಣದಲ್ಲಿ ಮಳಿಗೆಯೊಂದರಲ್ಲಿ ಅಗ್ನಿ ಅವಘಡ ಸಂಭವಿಸಿದೆ. ಮೊಬೈಲ್ ಅಂಗಡಿಯಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಬೆಂಕಿ ಜೋರಾಗಿ ಉರಿಯುತ್ತಿದ್ದು, ಅಂಗಡಿಯೊಳಗಿದ್ದ ವಸ್ತುಗಳು ಸುಟ್ಟು ಕರಕಲಾಗಿವೆ. ವಿಚಾರ ತಿಳಿಯುತ್ತಿದ್ದಂತೆ ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕೆ ದೌಡಾಯಿಸಿ ಬೆಂಕಿ ನಂದಿಸಿದ್ದಾರೆ. ಅಗ್ನಿ ಅವಘಡಕ್ಕೆ ನಿಖರ ಕಾರಣ ತಿಳಿದು ಬಂದಿಲ್ಲ.

## ಗಾಂಧಿ ಬಜಾರ್ ದೇಗುಲದಲ್ಲಿ ಕಳವು

ಸುದ್ದಿ ಸಂಚಾರಿ | ಶಿವಮೊಗ್ಗ

ಗಾಂಧಿ ಬಜಾರ್‌ನ ಕಾಳಿಕ ಪರಮೇಶ್ವರಿ ದೇವಸ್ಥಾನದ ಬೀಗ ಮುರಿದು ದೇವರ ಆಭರಣ, ಹಣ ಕಳ್ಳತನ ಮಾಡಲಾಗಿದೆ. ದೇವಿಯ ಮೂರ್ತಿಯನ್ನು ಹಾನಿಗೊಳಿಸಲಾಗಿದೆ ಎಂದು ಆರೋಪಿಸಿ ದೇವಸ್ಥಾನದ ಅಧ್ಯಕ್ಷ ರಮೇಶ್ ದೂರು ನೀಡಿದ್ದಾರೆ.ಏ.28ರಂದು ಬೆಳಗ್ಗೆ ದೇವಸ್ಥಾನದ ಮ್ಯಾನೇಜರ್ ಬಂದಾಗ ದೇಗುಲದ ಬಾಗಿಲಿನ ಬೀಗ ಮರಿದಿರುವುದು ಗೊತ್ತಾಗಿದೆ. ಗರ್ಭಗುಡಿಗೆ ಹಾಕಿದ್ದ ಬೀಗಗಳನ್ನು ಮುರಿಯಲಾಗಿತ್ತು. ಒಟ್ಟು 1.97 ಲಕ್ಷ ರೂ. ಮೌಲ್ಯ ಚಿನ್ನ, ಬೆಳ್ಳಿಯ ಆಭರಣ, 52 ಸಾವಿರ ರೂ. ನಗದು ಕಳ್ಳತನವಾಗಿದೆ ಎಂದು ಆರೋಪಿಸಲಾಗಿದೆ. ಇನ್ನು, ದೇವಿಯ ಮೂರ್ತಿಯ ಮುಖದ ಭಾಗದಲ್ಲಿ ಗೀಚಿ ಹಾನಿಗೊಳಿಸಲಾಗಿದೆ ಎಂದು ಆರೋಪಿಸಿ ದೊಡ್ಡಪೇಟೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



**Top News** ಆನವಟ್ಟಿ ಪಟ್ಟಣ ಪಂಚಾಯ್ತಿ:

# ವಿವಿಧ ಕ್ರೀಡೆಗಳ ಮೂಲಕ ಮತ ಜಾಗೃತಿ

ಸುದ್ದಿ-ಸಂಚಾರಿ
ಆನವಟ್ಟಿ: ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಉತ್ತಮ ಸರ್ಕಾರ ರಚಿಸಲು ಮತ್ತು ಅಭಿವೃದ್ಧಿಗೆ ಪೂರಕವಾಗಿ ಉತ್ತಮ ಅಭ್ಯರ್ಥಿಯನ್ನು ಆಯ್ಕೆ ಮಾಡಿಕೊಳ್ಳಲು ಸಂವಿಧಾನ ನಮಗೆ ಶ್ರೇಷ್ಠವಾದ ಹಕ್ಕು ನೀಡಿದೆ. ನಮಗೆ ನೀಡಿರುವ ಹಕ್ಕನ್ನು ನಿರ್ಲಕ್ಷೆ ಮಾಡದೆ, ಅತ್ಯಂತ ಜವಾಬ್ದಾರಿಯಿಂದ ಏಪ್ರಿಲ್ 7 ರಂದು ನಡೆಯುವ ಲೋಕಸಭೆ ಚುನಾವಣೆಯಲ್ಲಿ ನಿಮ್ಮ-ನಿಮ್ಮ ವ್ಯಾಪ್ತಿಯ ಮತಗಟ್ಟೆಗೆ ಹೋಗಿ ಮತದಾನ ಮಾಡಿ ಎಂದು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸಂತೋಷಕುಮಾರ್ ತಿಳಿಸಿದರು.

ಪಟ್ಟಣ ಪಂಚಾಯಿತಿ ಹಮ್ಮಿಕೊಂಡಿದ್ದ ಮತದಾನ ಜಾಗೃತಿ ಮತ್ತು ಅರಿವು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮತ್ತು ಬಸ್ ನಿಲ್ದಾಣದಲ್ಲಿ ಮಾನವ ಸರಪಣಿ ನಿರ್ಮಿಸುವ ಮೂಲಕ ಮತ್ತು ಜಾತ ಮಾಡುವ ಮೂಲಕ ಶೇ 100 ಮತದಾನ ಮಾಡುವಂತೆ ಪಟ್ಟಣ ಪಂಚಾಯಿತಿ ಸಿಬ್ಬಂದಿಗಳು ಅರಿವು ಮೂಡಿಸಿದರು.
ಕಳೆದ ಚುನಾವಣೆಯಲ್ಲಿ ಕಡಿಮೆ ಮತದಾನ ಮಾಡಿರುವ ವಾರ್ಡ್‌ಗಳಲ್ಲಿ ವಿಶೇಷವಾಗಿ ಮಹಿಳೆಯರಿಗೆ ರಂಗೋಲಿ ಸ್ಪರ್ಧೆ, ಮ್ಯೂಜಿಕಲ್ ಚೇರ್, ಮೆಹಂದಿ ಬಿಡಿಸುವುದು ಸೇರಿದಂತೆ ವಿವಿಧ ಕ್ರೀಡೆಗಳನ್ನು ಆಯೋಜಿಸಿ, ಅವರಿಗೆ ಬಹುಮಾನ ನೀಡಿ ನಂತರ ಮತದಾನದ ಬಗ್ಗೆ ಜಾಗೃತಿ ಮೂಡಿಸಲಾಯಿತು.

ಕಾರ್ಯಕ್ರಮದಲ್ಲಿ ಪಟ್ಟಣ ಪಂಚಾಯಿತಿ ಸಿಬ್ಬಂದಿಗಳಾದ ಪ್ರಭು, ಲಕ್ಷ್ಮೀನಾರಾಯಣ, ಜಾಕೀರ್, ಅಶೋಕ್, ಮನೋಜ್, ಗೀತಾ ಇದ್ದರು.



# ಮೇ.1 ಆನವಟ್ಟಿಯಲ್ಲಿ ಸಮಾವೇಶ

ಸುದ್ದಿ-ಸಂಚಾರಿ
ಸೊರಬ ತಾಲೂಕಿನ ಬಿಜೆಪಿ ಕಛೇರಿಯಲ್ಲಿ ನಡೆದ ಮಹಾಶಕ್ತಿ ಕೇಂದ್ರದ ಸಭೆಯಲ್ಲಿ ರಾಜ್ಯ ಬಿಜೆಪಿ ಕಾರ್ಯದರ್ಶಿಗಳು ಮತ್ತು ವಿಧಾನಪರಿಷತ್ ಶಾಸಕರು ಮತ್ತು ಶಿವಮೊಗ್ಗ ಲೋಕಸಭಾ ಚುನಾವಣೆಯ ಸೊರಬ ಕ್ಷೇತ್ರದ ಪ್ರಭಾರಿಗಳಾದ ಶ್ರೀ ಡಿ ಎಸ್ ಅರುಣ್ ಅವರು ಪಾಲ್ಗೊಂಡು ಮಾತನಾಡಿದರು.ಇದೇ ಮೇ ಒಂದನೇ ತಾರೀಖು ಆನವಟ್ಟಿಯಲ್ಲಿ ನಡೆಯುವ ಸಮಾವೇಶದ ಕುರಿತು ಮಾಹಿತಿ ನೀಡಿದರು.

ಸನ್ಮಾನ್ಯ ಶ್ರೀ ನರೇಂದ್ರ ಮೋದಿ ಅವರ ಜನಪ್ರಿಯತೆ ಹಾಗೂ ಕೇಂದ್ರ ಸರ್ಕಾರದ ಯೋಜನೆಗಳನ್ನು ಮತ್ತು ಶಿವಮೊಗ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಶ್ರೀ ಬಿ.ವೈ.ರಾಘವೇಂದ್ರ ಅವರ ಯೋಜನಗೆಳನ್ನು ಸಾರ್ವಜನಿಕರಿಗೆ ಸವಿಸ್ತಾರವಾಗಿ ತಿಳಿಸಲು ಕರೆ ನೀಡಿದರು.
ತಾಲೂಕು ಬಿಜೆಪಿ ಅಧ್ಯಕ್ಷರಾದ ಪ್ರಕಾಶ್, ಜಿಲ್ಲಾ ಸಂಘಟನಾ ಪ್ರಧಾನ ಕಾರ್ಯದರ್ಶಿ ನಟರಾಜ್ ಅವರು, ಜಿಲ್ಲಾ ಕಾರ್ಯದರ್ಶಿ ದೇವೇಂದ್ರಪ್ಪ, ಓಬಿಸಿ ಮೋರ್ಚಾ ತಾಲೂಕು ಅಧ್ಯಕ್ಷರಾದ ಉಮೇಶ್, ಗುರುಕುಮಾರ್ ಪಾಟೀಲ್, ಮಂಡಲ ಉಪಾಧ್ಯಕ್ಷರಾದ ಶ್ರೀಮತಿ ಪ್ರಭಾವತಿ, ಶ್ರೀಮತಿ ಸುಧಾ, ವಿಸ್ತಾರಕರಾದ ನವೀನ್ ಚಂದ್ರ, ತಾಳಗುಪ್ಪ ಮಹಾಶಕ್ತಿ ಕೇಂದ್ರದ ಅಧ್ಯಕ್ಷರಾದ ರವಿ, ಚಂದ್ರಗುತ್ತಿ ಮಹಾಶಕ್ತಿ ಕೇಂದ್ರದ ಅಧ್ಯಕ್ಷರಾದ ರಾಜು, ಉಳವಿ ಮಹಾಶಕ್ತಿ ಕೇಂದ್ರದ ಅಧ್ಯಕ್ಷರಾದ ಪರಶುರಾಮ್, ಸೊರಬ ನಗರ ಮಹಾಶಕ್ತಿ ಕೇಂದ್ರದ ಅಧ್ಯಕ್ಷರಾದ ಅಶೋಕ್ ಶೇಟ್, ಆನವಟ್ಟಿ ಮಹಾಶಕ್ತಿ ಕೇಂದ್ರದ ಅಧ್ಯಕ್ಷರಾದ ಕೊಟ್ರೇಶ್, ಜಡೆ ಮಹಾಶಕ್ತಿ ಕೇಂದ್ರದ ಅಧ್ಯಕ್ಷರಾದ ಸುರೇಂದ್ರ ಗೌಡ ಅವರು, ಮೂಡಿ ಮಹಾಶಕ್ತಿ ಕೇಂದ್ರದ ಅಧ್ಯಕ್ಷರಾದ ಶಿವನ ಗೌಡ್ರು, ಉದ್ರಿ ಮಹಾಶಕ್ತಿ ಕೇಂದ್ರದ ಅಧ್ಯಕ್ಷರಾದ ಓಂಕಾರಪ್ಪ ಹಾಗೂ ಪ್ರಮುಖರು ಉಪಸ್ಥಿತರಿದ್ದರು.